ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 21/11/19

ಅಮಿತ್ ಶಾ ಘೋಷಣೆ ದೇಶಾದ್ಯಂತ ಎನ್‌ಆರ್‌ಸಿ

ಅಕ್ರಮ ವಲಸಿಗರ ಪತ್ತೆ ಹಚ್ಚಿ ಗಡೀಪಾರು ರಾಜ್ಯಸಭೆಯಲ್ಲಿ ಗೃಹ ಸಚಿವರ ಹೇಳಿಕೆ

ಕನ್ನಡ ಪ್ರಭ 21/11/19

• ಪಿಟಿಐ ನವದೆಹಲಿ

ಅಕ್ರಮ ವಲಸಿಗರನ್ನು ಪತ್ತೆ ಹಚ್ಚಿ ಗಡೀಪಾರು ಮಾಡಲು ಈಶಾನ್ಯ ರಾಜ್ಯ ಅಸ್ಸಾಂನಲ್ಲಿ ನಡೆಸಲಾದ ರಾಷ್ಟ್ರೀಯ ಜನಸಂಖ್ಯಾ ನೋಂದಣಿ (ನ್ಯಾಷನಲ್ ರಿಜಿಸ್ಟರ್ ಆಫ್ ಸಿಟಿಜನ್ಸ್-ಎನ್‌ಆರ್‌ಸಿ) ಮನ್ನು ದೇಶಾದ್ಯಂತ ವಿಸ್ತರಿಸುವುದಾಗಿ ಗೃಹ ಸಚಿವ ಅಮಿತ್ ಶಾ ಅವರು ಮತ್ತೊಮ್ಮೆ ಹೇಳಿದ್ದಾರೆ.

ಆದರೆ ಇದಕ್ಕೆ ಶೀಘ್ರ ವಿರೋಧ ವ್ಯಕ್ತಪಡಿಸಿರುವ ತೃಣಮೂಲ ಕಾಂಗ್ರೆಸ್ ನಾಯಕಿ ಮಮತಾ ಬ್ಯಾನರ್ಜಿ, ಪಶ್ಚಿಮ ಬಂಗಾಳದಲ್ಲಿ ಎನ್‌ಆರ್‌ಸಿ ಜಾರಿಗೆ ತರಲು ಬಿಡುವುದಿಲ್ಲ ಎಂದು ಅಬ್ಬರಿಸಿದ್ದಾರೆ.

ಚಿಂತೆ ಬೇಡ: ಸೆಪ್ಟೆಂಬರ್ ಹಾಗೂ ಅಕ್ಟೋಬರ್‌ನಲ್ಲಿ ಮಾಧ್ಯಮಗಳ ಜತೆ ಮಾತನಾಡಿ ದೇಶಾದ್ಯಂತ ಎನ್‌ಆರ್‌ಸಿ ವಿಸ್ತರಿಸುವುದಾಗಿ ಅಮಿತ್ ಶಾ ಹೇಳಿದ್ದರು. ಆದರೆ ಇದೇ ಮೊದಲ ಬಾರಿಗೆ ಇದನ್ನು ಸಂಸತ್ತಿನಲ್ಲಿ ಮೊಳಿಸಿದ್ದಾರೆ. ≥10

ಚಿಂತೆ ಬೇಕಿಲ್ಲ, ನಿಮ್ಮ ದಾಖಲೆ ರೆಡಿ ಇಟ್ಟುಕೊಳ್ಳಿ

- ರಾಷ್ಟ್ರೀಯ ಜನಸಂಖ್ಯಾ ನೋಂದಣಿ (ಎನ್‌ಆರ್‌ಸಿ) ಜಾರಿ ಬಗ್ಗೆ ಭಾರತದ ಜನಸಾಮಾನ್ಯರು ಆತಂಕಪಡಬೇಕಿಲ್ಲ
- ಆಧಾರ್, ಪಾಸ್‌ಪೋರ್ಟ್, ಜನನ ಪ್ರಮಾಣಪತ್ರ ಇತ್ಯಾದಿ... ಯಾವುದಾದರೂ ಸರ್ಕಾರಿ ದಾಖಲೆ ಇದ್ದರೆ ಸಾಕು
- ಭಾರತದಲ್ಲೇ ಜನಿಸಿ ಬೆಳೆದವರು ಎನ್‌ಆರ್‌ಸಿ ಜಾರಿ ವೇಳೆ ಅಧಿಕಾರಿಗಳಿಗೆ ಸೂಕ್ತ ದಾಖಲೆ ಒದಗಿಸಿ ಪೃಢೀಕರಿಸಿಕೊಳ್ಳಿ

ದೇಶಾದ್ಯಂತ ಎನ್‌ಆರ್‌ಸಿ ಜಾರಿ: ಶಾ

ಮೊದಲ ಪುಟದಿಂದ

[illegible] ಮಾತನಾಡಿದ ಅವರು. ಎನ್‌ಆರ್‌ಸಿ ಪ್ರಕ್ರಿಯೆ ನಡೆಸುವಾಗ ಧರ್ಮದ ಆಧಾರದಲ್ಲಿ ತಾರತಮ್ಯ ಮಾಡುವುದಿಲ್ಲ. ಯಾವುದೇ ಧರ್ಮಕ್ಕೆ ಸೇರಿದವರೂ ಚಿಂತೆ ಪಡಬೇಕಿಲ್ಲ ಎಂದು ಹೇಳಿದರು.

ಬೇರೊಂದು ಸಮುದಾಯಕ್ಕೆ ಸೇರಿದ ಜನರನ್ನು ಸೇರ್ಪಡೆ ಮಾಡಬಾರದು ಎಂಬ ಅಂಶವೇ ಎನ್‌ಆರ್‌ಸಿಯಲ್ಲಿ ಇಲ್ಲ. ಭಾರತೀಯ ಪ್ರಜೆಗಳಾಗಿರುವ ಎಲ್ಲ ಧರ್ಮೀಯ ಜನರ ಹೆಸರನ್ನೂ ಸೇರಿಸಲಾಗುತ್ತದೆ. ಧರ್ಮದ ಆಧಾರದಲ್ಲಿ ತಾರತಮ್ಯ ಮಾಡುವ ಪ್ರಶ್ನೆಯೇ ಇಲ್ಲ. ಎನ್‌ಆರ್‌ಸಿಯೇ ಬೇರೆ, ಪೌರತ್ವ ತಿದ್ದುಪಡಿ ಮಸೂದೆಯೇ ಬೇರೆ ಎಂದು ಸ್ಪಷ್ಟಪಡಿಸಿದರು.

ಸುಪ್ರೀಂಕೋರ್ಟ್‌ನ ಆದೇಶದ ಮೇರೆಗೆ ಅಸ್ಸಾಂನಲ್ಲಿ ಎನ್‌ಆರ್‌ಸಿಯನ್ನು ನಡೆಸಲಾಯಿತು. ದೇಶಾದ್ಯಂತ ಎನ್‌ಆರ್‌ಸಿಯನ್ನು ಜಾರಿಗೆ ತರುವಾಗ ಅಸ್ಸಾಂ ಅನ್ನೂ ಸೇರ್ಪಡೆ ಮಾಡಿಕೊಳ್ಳಲಾಗುತ್ತದೆ. ಎನ್‌ಆರ್‌ಸಿ ಕರಡು ಪಟ್ಟಿಯಲ್ಲಿ ಹೆಸರು ಇಲ್ಲದ ವ್ಯಕ್ತಿಗಳು ನ್ಯಾಯಾಧಿಕರಣದ ಮೊರೆ ಹೋಗಬೇಕಿಲ್ಲ ಗುತ್ತದೆ. ಇದಕ್ಕಾಗಿ ಅಸ್ಸಾಂನಾದ್ಯಂತ ನ್ಯಾಯಾಧಿಕರಣಗಳನ್ನು ತೆರೆಯಲಾಗಿದೆ. ಅಲ್ಲಿಗೆ ಹೋಗಲು ಹಣ ಇಲ್ಲ ಎನ್ನುವವರಿಗೆ ಅಸ್ಸಾಂ ಸರ್ಕಾರವೇ ಹಣ ಕೊಟ್ಟು ಹೋಗಲು ನೇಮಕ ಮಾಡಿಕೊಡಲಿದೆ ಎಂದು ವಿವರಿಸಿದರು.

ಧಾರ್ಮಿಕ ದೌರ್ಜನ್ಯದ ಹಿನ್ನೆಲೆಯಲ್ಲಿ ಪಾಕಿಸ್ತಾನ, ಬಾಂಗ್ಲಾದೇಶ ಹಾಗೂ ಆಫ್ಘಾನಿಸ್ತಾನವನ್ನು ತೊರೆದಿರುವ ಹಿಂದು, ಬೌದ್ಧ, ಜೈನ, ಕ್ರೈಸ್ತ, ಸಿಖ್ ಮತ್ತು ಪಾರ್ಸಿಗಳಿಗೆ ಭಾರತೀಯ ಪೌರತ್ವ ನೀಡಬೇಕೆಂಬ ಬೇಡಿಕೆಯನ್ನು ಕೇಂದ್ರ ಸರ್ಕಾರ ಒಪ್ಪಿಕೊಳ್ಳುತ್ತದೆ. ಇದಕ್ಕಾಗಿಯೇ ಪೌರತ್ವ ತಿದ್ದುಪಡಿ ಮಸೂದೆಯನ್ನು ತರಲಾಗಿದೆ. ಇವರಡಿ ಧಾರ್ಮಿಕ ದೌರ್ಜನ್ಯಕ್ಕೆ ಬಲಗಾದ ನಿರಾಶ್ರಿತರಿಗೆ ಪೌರತ್ವ ನೀಡಲಾಗುತ್ತದೆ. ಹಿಂದಿನ ಲೋಕಸಭೆ ಈ ಮಸೂದೆಯನ್ನು ಅಂಗೀಕರಿಸಿತ್ತು. ಸಲೆಕ್ಟ್ ಕಮಿಟಿ ಕೂಡ ಒಪ್ಪಿತ್ತು. ಆದರ ಲೋಕಸಭೆ ವಿಸರ್ಜನೆಯಾಗಿತ್ತು. ಹೀಗಾಗಿ ಮತ್ತೆ ಮಸೂದೆ ತರಲಾಗಿದೆ. ಆದಕ್ಕೂ ಎನ್‌ಆರ್‌ಸಿಗೂ ಸಂಬಂಧವಿಲ್ಲ ಎಂದರು.

ಮಮತಾ ವಿರೋಧ: ಎನ್‌ಆರ್‌ಸಿಯನ್ನು ದೇಶಾದ್ಯಂತ ಜಾರಿಗೊಳಿಸುವ ಕೇಂದ್ರ ಸರ್ಕಾರದ ಯತ್ನಕ್ಕೆ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಿರೋಧ ವ್ಯಕ್ತಪಡಿಸಿದ್ದಾರೆ. ಎನ್‌ಆರ್‌ಸಿ ಜಾರಿ ಹೆಸರಿನಲ್ಲಿ ಕೆಲವು ವ್ಯಕ್ತಿಗಳು ಗೊಂದಲ ಸೃಷ್ಟಿಸಲು ಯತ್ನಿಸುತ್ತಿದ್ದಾರೆ. ಅಸ್ಸಾಂನಲ್ಲಿ ಎನ್‌ಆರ್‌ಸಿ ಅಂತಿಮ ಪಟ್ಟಿಯಿಂದ 14 ಲಕ್ಷ ಹಿಂದು ಹಾಗೂ ಬಂಗಾಳಿಗಳು ಹೊರಗುಳಿದಿದ್ದಾರೆ. ಅದರ ಬಗ್ಗೆ ಬಿಜೆಪಿ ಉತ್ತರ ನೀಡುತ್ತಿಲ್ಲ. ಬಂಗಾಳದಲ್ಲಿ ಎನ್‌ಆರ್‌ಸಿ ಜಾರಿಗೆ ಬೆಡುವುದಿಲ್ಲ. ಜನರ ಪೌರತ್ವ ಕೂಡಾ ಅವರನ್ನು ನಿರಾಶ್ರಿತರನ್ನಾಗಿಸುವುದಿಲ್ಲ ಎಂದು ಬಂಗಾಳದ ಸಾರ್ವಜನಿಕ ಸಭೆಯೊಂದರಲ್ಲಿ ಹೇಳಿದ್ದಾರೆ.

ಏನಿದು ಪೌರತ್ವ ಮಸೂದೆ?

ಭಾರಿಗ್ಲಾದೇಶ, ಪಾಕಿಸ್ತಾನ, ಆಫ್ಘಾನಿಸ್ತಾನ ದೇಶಗಳಲ್ಲಿ ಧಾರ್ಮಿಕ ಕಿರುಕುಳ ಅನುಭವಿಸಿದ ಕಾರಣಕ್ಕೆ ಭಾರತಕ್ಕೆ ವಲಸೆ ಬಂದಿರುವ ಮುಸ್ಲಿಮೇತರರು, ಅಂದರೆ ಹಿಂದೂಗಳು, ಸಿಖ್ಖರು, ಬೌದ್ಧರು, ಜೈನರು, ಪಾರ್ಸಿ ಮತ್ತು ಕ್ರೈಸ್ತರಿಗೆ ಭಾರತೀಯ ಪೌರತ್ವ ನೀಡಲು ಕೇಂದ್ರ ಸರ್ಕಾರ ಪೌರತ್ವ ಕಾಯ್ದೆಗೆ ತಿದ್ದುಪಡಿ ತರಲು ನಿರ್ಧರಿಸಿದೆ. ಜೊತೆಗೆ ಹೀಗೆ ಪೌರತ್ವ ಪಡೆಯಲು, ವಲಸಿಗರು ಭಾರತದಲ್ಲಿ ಕನಿಷ್ಠ 11 ವರ್ಷ ನೆಲೆಸಿರಬೇಕು ಎಂಬ ನಿಯಮವನ್ನು ಸರ್ಕಾರ 6 ವರ್ಷಕ್ಕೆ ಇಳಿಸಿದೆ. ಆದರೆ ಧರ್ಮದ ಆಧಾರದಲ್ಲಿ ಪೌರತ್ವ ನೀಡುವುದಕ್ಕೆ ಈಶಾನ್ಯ ರಾಜ್ಯಗಳ ಹಲವು ಸಂಘಟನೆಗಳು ವಿರೋಧ ಹೊಂದಿವೆ.

ಏನಿದು ಎನ್‌ಆರ್‌ಸಿ?

ರಾಷ್ಟ್ರೀಯ ಜನಸಂಖ್ಯಾ ನೋಂದಣಿ (ಎನ್‌ಆರ್‌ಸಿ) ಮಸೂದೆಯು, ದೇಶದಲ್ಲಿ ನೆಲೆಸಿರುವ ಅಕ್ರಮ ವಲಸಿಗರನ್ನು ದೇಶದಿಂದ ಹೊರಹಾಕುವ ಉದ್ದೇಶ ಹೊಂದಿದೆ. ಮೊದಲ ಹಂತದಲ್ಲಿ ಸುಪ್ರೀಂಕೋರ್ಟ್ ಸೂಚನೆ ಅನ್ವಯ ಇದನ್ನು ಅಸ್ಸಾಂನಲ್ಲಿ ಜಾರಿಗೆ ತರಲಾಗಿತ್ತು.

ಅಲ್ಲಿ ಇತ್ತೀಚೆಗೆ ಪ್ರಕಟಿಸಲಾದ ಅಂತಿಮ ಪಠಡಿ ಅನ್ವಯ, 30 ಲಕ್ಷ ಜನರನ್ನು ಅಕ್ರಮ ನಿವಾಸಿಗಳು ಎಂದು ಘೋಷಿಸಲಾಗಿದೆ. ಆದರೆ ಇವರಿಗೆಲ್ಲಾ ವಿದೇಶಿಗರ ಮೇಲ್ಮನವಿ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸುವ ಹಕ್ಕನ್ನು ಕಲ್ಪಿಸಲಾಗಿದೆ.